ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ದಿನಾಂಕ: 03-07-2021

ಸಂ: ಎಂಎಜಿ(2)ಸಿಆರ್156/2021/133465/ಸಿ4/22

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ಇವರ ನಡವಳಿ

ವಿಷಯ: ಜಿಲ್ಲೆಯಲ್ಲಿ ಕೋವಿಡ್-19 ಮಾರ್ಗಸೂಚಿಗಳನ್ನು ಸಡಿಲಗೊಳಿಸಿ ಆದೇಶ

ಉಲ್ಲೇಖ: ಸರ್ಕಾರದ ಆದೇಶ ಸಂ.ಆರ್.ಡಿ 158 /ಟಿ.ಎನ್.ಆರ್ /2020 ದಿನಾಂಕ: 03.07.2021

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 (ಕೋರೊನಾ ವೈರಾಣು ಕಾಯಿಲೆ-2019) ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕಾಲಕಾಲಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಕಟ್ಟುನಿಟ್ಟಿನ ನಿರ್ಬಂದಗಳ ಪರಿಣಾಮಕಾರಿ ಅನುಷ್ಠಾನದಿಂದಾಗಿ ಕೋವಿಡ್ ಪ್ರಕರಣಗಳ ಸಂಖ್ಯೆಯಲ್ಲಿ ಇಳಿಕೆಯಾಗಿರುತ್ತದೆ.

ಜಿಲ್ಲೆಯಲ್ಲಿ ಕೋವಿಡ್ ಪಾಸಿಟಿವಿಟಿ ದರವು ಕಳೆದ ಒಂದು ವಾರದಿಂದ 5% ಕ್ಕಿಂತ ಕಡಿಮೆಯಿರುವುದರಿಂದ ಹಾಗೂ ಜಿಲ್ಲೆಯಲ್ಲಿ ಕೋವಿಡ್ ಪ್ರಕರಣಗಳು ಇಳಿಕೆಯಾಗುತ್ತಿರುವುದರಿಂದ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ **ಹೆಚ್ಚುವರಿ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಿ ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗೃತೆಗೆ ಸಂಬಂಧಿಸಿದಂತೆ ನಿರ್ದೇಶನಗಳನ್ನು ಹೊರಡಿಸಲಾಗಿರುತ್ತದೆ.**

ಆದ್ದರಿಂದ, ಸರ್ಕಾರದ ಉಲ್ಲೇಖಿತ ಆದೇಶದಂತೆ ಸಾರ್ವಜನಿಕ ಹಿತದೃಷ್ಟಿಯಿಂದ **ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ವಿಪತ್ತು **ನಿರ್ವಹಣಾ ಕಾಯ್ದೆ 2005ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತ 1973 ರ ಕಲಂ 144 (3)** ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ.

## *ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗೃತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳು*

1. **ಕೋವಿಡ್-19 ನಿಯಂತ್ರಿತ ವಲಯಗಳ ಹೊರಗಿನ ಪ್ರದೇಶಗಳಲ್ಲಿ, *ಈ ಕೆಳಗಿನ ಚಟುವಟಿಕೆಗಳನ್ನು ಹೊರತುಪಡಿಸಿ* ಉಳಿದ ಎಲ್ಲಾ ಚಟುವಟಿಕೆಗಳನ್ನು ಅನುಮತಿಸಲಾಗಿದೆ.**

   I. ಚಿತ್ರಮಂದಿರಗಳು / ಸಿನೆಮಾ ಹಾಲ್‌ಗಳು ಮತ್ತು ಪಬ್‌ಗಳು.

   II. ಕೋವಿಡ್-19 ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಮತ್ತು ಸಂಬಂಧಪಟ್ಟ ಇಲಾಖೆಗಳು ನೀಡುವ SOPs ಗೆ ಬದ್ಧರಾಗಿ ಸ್ಪರ್ಧಾತ್ಮಕ ತರಬೇತಿ ಉದ್ದೇಶಕ್ಕಾಗಿ ಮಾತ್ರವೇ ಈಜುಕೊಳಗಳನ್ನು ಅನುಮತಿಸಲಾಗಿದೆ.

   III. ಕೋವಿಡ್-19 ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಯಾವುದೇ ಪ್ರೇಕ್ಷಕರನ್ನು ಒಳಗೊಳ್ಳದೆ ಅಭ್ಯಾಸದ ಉದ್ದೇಶಕ್ಕಾಗಿ ಮಾತ್ರವೇ ಕ್ರೀಡಾ ಸಂಕೀರ್ಣಗಳು ಮತ್ತು ಸ್ಟೇಡಿಯಂಗಳನ್ನು ತೆರೆಯಲು ಅನುಮತಿಸಿದೆ.

   IV. ಎಲ್ಲಾ ಸಾಮಾಜಿಕ / ರಾಜಕೀಯ / ಕ್ರೀಡೆ / ಮನರಂಜನೆ / ಶೈಕ್ಷಣಿಕ / ಸಾಂಸ್ಕೃತಿಕ / ಧಾರ್ಮಿಕ ಕಾರ್ಯಗಳು / ಇತರ ಸಭೆಗಳು ಮತ್ತು ದೊಡ್ಡ ಸಭೆಗಳನ್ನು ನಿರ್ಬಂಧಿಸಲಾಗಿದೆ.

   V. ಮದುವೆ / ಕುಟುಂಬ ಕಾರ್ಯಕ್ರಮಗಳನ್ನು 100 ಜನರ ಪರಿಮಿತಿಗೊಳಪಟ್ಟು ಕೋವಿಡ್-19 ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ನಡೆಸಲು ಅನುಮತಿಸಲಾಗಿದೆ ಮತ್ತು ರಾಜ್ಯ ಸರ್ಕಾರವು ಹೊರಡಿಸಿರುವ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

   VI. ಶವಸಂಸ್ಕಾರ / ಅಂತ್ಯಕ್ರಿಯೆಗಳನ್ನು ಗರಿಷ್ಠ 20 ಜನರ ಪರಿಮಿತಿಗೊಳಪಟ್ಟು ಕೋವಿಡ್-19 ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ನಡೆಸಲು ಅನುಮತಿಸಲಾಗಿದೆ.

   VII. ಧಾರ್ಮಿಕ ಸ್ಥಳಗಳನ್ನು ದರ್ಶನಕ್ಕೆ ಮಾತ್ರವೇ ತೆರೆಯಲು ಅವಕಾಶವಿದೆ. ಯಾವುದೇ ಪೂಜಾ-ಸೇವೆಗಳನ್ನು ನಡೆಸಲು ಅವಕಾಶವಿರುವುದಿಲ.

VIII. ಆಸನದ ಸಾಮರ್ಥ್ಯಕ್ಕೆ ತಕ್ಕಂತೆ ಸಾರ್ವಜನಿಕ ಸಾರಿಗೆಗಳು ಕಾರ್ಯನಿರ್ವಹಿಸಲು ಅನುಮತಿಸಿದೆ.

IX. ಎಲ್ಲಾ ಅಂಗಡಿಗಳು, ರೆಸ್ಟೋರೆಂಟ್‌ಗಳು, ಮಾಲ್‌ಗಳು, ಖಾಸಗಿ ಕಛೇರಿಗಳು, ಮುಚ್ಚಿದ ಸ್ಥಳಗಳಲ್ಲಿ ಕೋವಿಡ್-19 ಸಮುಚಿತ ವರ್ತನೆಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ತಪ್ಪಿದ್ದಲ್ಲಿ, ವಿಪತ್ತು ನಿರ್ವಹಣಾ ಕಾಯ್ದೆ 2005 ರ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

X. ಎಲ್ಲಾ ಶೈಕ್ಷಣಿಕ ಸಂಸ್ಥೆಗಳು / ಟ್ಯುಟೋರಿಯಲ್ / ಕಾಲೇಜುಗಳು ಮುಂದಿನ ಆದೇಶದವರೆಗೆ ಮುಚ್ಚಿರುತ್ತವೆ.

2. ಜಿಲ್ಲೆಯಲ್ಲಿ ರಾತ್ರಿ 09-00 ಗಂಟೆಯಿಂದ ಬೆಳಗ್ಗೆ 05-00 ಗಂಟೆಯವರೆಗೆ **ಅನುಬಂಧ "ಎ"** ಯಲ್ಲಿನ ಮಾರ್ಗಸೂಚಿಗಳನ್ವಯ **ರಾತ್ರಿ ಕರ್ಫ್ಯೂ** ಮುಂದುವರೆಯುತ್ತದೆ.

3. **ಕೋವಿಡ್-19 ಸಮುಚಿತ ವರ್ತನೆ.**

a) ಮಂಗಳೂರು ಮಹಾನಗರಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳು ಕೋವಿಡ್-19 ಸಮುಚಿತ ವರ್ತನೆಯನ್ನು ಪ್ರೇರೇಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು. ಸಾರ್ವಜನಿಕರು ಮುಖಗವಸು ಧರಿಸುವಿಕೆ, ಕೈಗಳನ್ನು ನೈರ್ಮಲ್ಯಗೊಳಿಸುವುದು ಮತ್ತು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದನ್ನು ಖಚಿತಪಡಿಸಿಕೊಳ್ಳುವುದು.

b) ಮುಖಗವಸು ಧರಿಸುವುದು ಅತ್ಯವಶ್ಯಕ ಕೋವಿಡ್ ನಿಯಂತ್ರಣ ಕ್ರಮವಾಗಿದೆ. ಮಾಸ್ಕ್ ಉಲ್ಲಂಘನ ಪ್ರಕರಣಗಳಿಗೆ ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ರೂ.250/- ಹಾಗೂ ಉಳಿದ ಕಡೆಗಳಲ್ಲಿ ರೂ.100/- ದಂಡ ವಿಧಿಸುವುದು.

c) ಕೋವಿಡ್-19 ನಿರ್ವಹಣೆಯ ರಾಷ್ಟ್ರೀಯ ನಿರ್ದೇಶನಗಳನ್ನು ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಪಾಲಿಸುವುದು.

d) ದಿನಾಂಕ: 31-07-2021ರವರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ದಿನಾಂಕ: 28-06-2021ರ ಸಲಹೆಯಲ್ಲಿ ಸೂಚಿಸಿರುವಂತೆ ಕೋವಿಡ್-19 ಪರಿಣಾಮಕಾರಿ ನಿರ್ವಹಣೆಗಾಗಿ 5 ಅಂಶಗಳ ಕಾರ್ಯತಂತ್ರವನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.

ಮೇಲಿನ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ. ಈ ಆದೇಶವನ್ನು ಯಾವುದೇ ವ್ಯಕ್ತಿ / ವ್ಯಕ್ತಿಗಳು ಉಲ್ಲಂಘಿಸಿದ್ದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005 ರ ಕಲಂ 51 ರಿಂದ 60ರ ಅನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020ರ ಕಲಂ 4, 5 ಮತ್ತು 10 ರಂತೆ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 03-07-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

**ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ**
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,**
**ಹಾಗೂ ಅಧ್ಯಕ್ಷರು,**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

ರಿಗೆ:

1. ಪೊಲೀಸ್ ಆಯುಕ್ತರು, ಮಂಗಳೂರು ನಗರ, ಮಂಗಳೂರು-ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದ.ಕ ಜಿಲ್ಲಾ ಪಂಚಾಯತ್, ಮಂಗಳೂರು
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.
9. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಇವರಿಗೆ ಕಳುಹಿಸುತ್ತಾ ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

**ಅನುಬಂಧ-ಎ**

## ರಾತ್ರಿ ಕರ್ಫ್ಯೂ ಮಾರ್ಗಸೂಚಿಗಳು

1. ಅತ್ಯಾವಶ್ಯಕ ಚಟುವಟಿಕೆಗಳನ್ನು ಹೊರತುಪಡಿಸಿ ರಾತ್ರಿ 9:00 ಗಂಟೆಯಿಂದ ಬೆಳಿಗ್ಗೆ 5.00 ಗಂಟೆಯವರೆಗೆ ಜನ ಸಂಚಾರಕ್ಕೆ ಕಡ್ಡಾಯವಾಗಿ ನಿಷೇಧವಿರುತ್ತದೆ.
2. ತುರ್ತು ಚಿಕಿತ್ಸೆಗಾಗಿ ಸಂಚರಿಸಬೇಕಾದ ಅಗತ್ಯವಿರುವ ರೋಗಿಗಳು ಮತ್ತು ಅವರ ಪರಿಚಾರಕರು / ವ್ಯಕ್ತಿಗಳಿಗೆ ಸಂಚರಿಸಲು ಅನುಮತಿ ಇರುತ್ತದೆ.
3. ರಾತ್ರಿ ವೇಳೆಯಲ್ಲಿ ಕಾರ್ಯನಿರ್ವಹಿಸುವ ಅಗತ್ಯವಿರುವಂತಹ ಎಲ್ಲಾ ಕೈಗಾರಿಕೆಗಳು / ಕಂಪನಿಗಳಿಗೆ ಕಾರ್ಯನಿರ್ವಹಿಸಲು ಅನುಮತಿ ಇರುತ್ತದೆ.
4. ಅಂತಹ ಸಂಸ್ಥೆಗಳ ನೌಕರರ ಸಂಚಾರಕ್ಕೆ, ಅವರ ಸಂಬಂಧಪಟ್ಟ ಸಂಸ್ಥೆ / ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ / ಹೊಂದಿಕೊಂಡು ಪ್ರಯಾಣಿಸಲು ಅನುಮತಿಸಲಾಗುವುದು. ದೂರವಾಣಿ ಸಂಪರ್ಕ ಮತ್ತು ಅಂತರ್ಜಾಲ ಸೇವೆ ಒದಗಿಸುವ ಸಂಸ್ಥೆಗಳ ನೌಕರರು ಮತ್ತು ವಾಹನಗಳ ಸಂಚಾರಕ್ಕೆ ಅವರ ಸಂಬಂಧಪಟ್ಟ ಸಂಸ್ಥೆ / ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ ಹೊಂದಿಕೊಂಡು ಪ್ರಯಾಣಿಸಲು ಅನುಮತಿಸಲಾಗುವುದು. ಮಾಹಿತಿ ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ಆಧಾರಿತ ಸೇವೆಗಳ ಕಂಪನಿಗಳು /ಸಂಸ್ಥೆಯ ಅತ್ಯಾವಶ್ಯಕ ಸಿಬ್ಬಂದಿ / ನೌಕರರು ಮಾತ್ರ ಕಚೇರಿಯಿಂದ ಕಾರ್ಯನಿರ್ವಹಿಸತಕ್ಕದ್ದು. ಉಳಿದ ಸಿಬ್ಬಂದಿಯು ಮನೆಯಿಂದಲೇ ಕಾರ್ಯನಿರ್ವಹಿಸುವುದು.
5. ಔಷಧ ಮಳಿಗೆಗಳು ಸೇರಿದಂತೆ ವೈದ್ಯಕೀಯ, ತುರ್ತು ಮತ್ತು ಅತ್ಯಾವಶ್ಯಕ ಸೇವೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುವುದು ಮತ್ತು ಇತರ ವಾಣಿಜ್ಯ ಚಟುವಟಿಕೆಗಳನ್ನು ನಿಷೇಧಿಸಿದೆ.
6. ಖಾಲಿ ವಾಹನಗಳು ಸೇರಿದಂತೆ, ಟ್ರಕ್ ಗಳು, ಸರಕು ಸಾಗಣೆ ವಾಹನಗಳು ಅಥವಾ ಯಾವುದೇ ಸರಕು ಸಾಗಣೆ ವಾಹನಗಳ ಮೂಲಕ ಎಲ್ಲಾ ಬಗೆಯ ಸರಕುಗಳನ್ನು ಸಾಗಿಸುವುದಕ್ಕೆ ಯಾವುದೇ ನಿರ್ಬಂಧ ಇರತಕ್ಕದ್ದಲ್ಲ. ಇ-ವಾಣಿಜ್ಯ ಕಂಪನಿಗಳಿಂದ ಸರಕುಗಳ ಹೋಮ್ ಡೆಲಿವರಿಗೆ ಮತ್ತು ಅವುಗಳ ಕಾರ್ಯಾಚರಣೆಗಳಿಗೆ ಅನುಮತಿಸಿದೆ.
7. ಬಸ್ಸು, ರೈಲು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿಸಿದೆ. ವಿಮಾನ, ರೈಲು ಮತ್ತು ರಸ್ತೆ ಮೂಲಕ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಲು ವಿಮಾನ ನಿಲ್ದಾಣಗಳಿಗೆ, ಬಸ್ ಟರ್ಮಿನಲ್ / ಬಸ್ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣಗಳಿಗೆ ಹೋಗಿ ಬರುವುದಕ್ಕೆ ಸಾರ್ವಜನಿಕ ಸಾರಿಗೆ ವಾಹನಗಳು, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಸಂಚಾರಕ್ಕೆ ಅನುಮತಿ ನೀಡಲಾಗಿದೆ. ಅಧಿಕೃತ ಪ್ರಯಾಣ ದಾಖಲೆ ಅಥವಾ ಟಿಕೇಟ್ ಅನ್ನು ಪ್ರದರ್ಶಿಸಿದ ನಂತರವೇ ಅಂತಹ ಸಂಚಾರಕ್ಕೆ ಅನುಮತಿ ನೀಡಲಾಗುವುದು.

03/07/2021

ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.